ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಯಚೂರು ಜಿಲ್ಲೆಯಲ್ಲಿ ನೆರೆ ಹಾವಳಿಯಿಂದ ಹಾನಿಗೊಳಗಾಗಿರುವ ಲೋಕೋಪಯೋಗಿ ರಸ್ತೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-

173 (267) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದ ಹೊರವಲಯz Àಲ್ಲಿ ರಿಂಗ್ ರಸ್ತೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು-ಬಾಚಿರಸ್ತೆ ರಾಜ್ಯ ಹೆದ್ದಾರಿ-20 ಹಾಗೂ

ಕಲ್ಮಲಾ ಕ್ರಾಸ್‌ನಿಂದ ಬುಂದಿಗುಂಪಾ ಕ್ರಾಸ್‌ವರೆಗೂ ರಾಜ್ಯ ಹೆದ್ದಾರಿ-23 ಇವುಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ನೆರೆ ಹಾವಳಿಯಿಂದ ರಾಯಚೂರು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಪ್ರಮುಖ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ರಸ್ತೆಗಳನ್ನು ಅಭಿವೃದ್ಧಿ ಮಾಡಲು ರಾಯಚೂರು ವಿಭಾಗಕ್ಕೆ ಮಂಜೂರಾತಿ ಆಗಿರುವ ಅನುದಾನ ಎಷ್ಟು?